## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ ಸಂಖ್ಯಾಬಲವನ್ನು ಹೆಚ್ಚಿಸುವ ಕುರಿತು.

**ಓದಲಾಗಿದೆ:** 1. ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರ ಏಕಕಡತ ಸಂಖ್ಯೆ:ಪವಕನಿ/ಇಡಿ-2/ಸಿಆರ್-20/13-14,ದಿನಾಂಕ14-08-2013.

**ಪ್ರಸ್ತಾವನೆ:-**

ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಇವರು ಮೇಲೆ ಓದಲಾದ ಕ್ರಮ ಸಂಖ್ಯೆ (1)ರಲ್ಲಿನ ಏಕಕಡತದಲ್ಲಿ ರಾಜ್ಯದ ಏಳು ಜಿಲ್ಲೆಗಳ ಹದಿನೇಳು ತಾಲ್ಲೂಕುಗಳಲ್ಲಿ ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖಾ ವತಿಯಿಂದ ನಡೆಯುತ್ತಿರುವ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿನ ಸಂಖ್ಯಾಬಲವನ್ನು ಹೆಚ್ಚಿಸುವಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಕೋರಿರುವುದಾಗಿ ಹಾಗೂ ಸದರಿ ಜಿಲ್ಲೆಗಳಲ್ಲಿ ಪರಿಶಿಷ್ಟ ವರ್ಗಗದ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿದ್ದು ನಿಗದಿಪಡಿಸಿದ ಸಂಖ್ಯಾಬಲಕ್ಕಿಂತ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳಿಂದ ವಿದ್ಯಾರ್ಥಿನಿಲಯಕ್ಕೆ ಪ್ರವೇಶ ಕೋರಿ ಹೆಚ್ಚಿನ ಬೇಡಿಕೆಗಳು ಬರುತ್ತಿದ್ದು ಗ್ರಾಮೀಣ ಪ್ರದೇಶದ ಬಡ ಕುಟುಂಬದ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳು ಊಟ ವಸತಿ ವ್ಯವಸ್ಥೆ ಇಲ್ಲದೆ ವಿದ್ಯಾಭ್ಯಾಸ ಮುಂದುವರೆಸಲು ಅನಾನುಕೂಲವಾಗಿರುವುದರಿಂದ ಪರಿಶಿಷ್ಟ ವರ್ಗದ ವಿದ್ಯಾರ್ಥಿಗಳ ಶೈಕ್ಷಣಿಕ ಅಭಿವೃದ್ಧಿಗಾಗಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿನ ವಿದ್ಯಾರ್ಥಿಗಳ ಸಂಖ್ಯಾಬಲವನ್ನು ಹೆಚ್ಚಿಸುವುದು ಅತ್ಯಾವಶ್ಯಕವಾಗಿರುತ್ತದೆ ಎಂದು ತಿಳಿಸಿ ಸಂಖ್ಯಾಬಲವನ್ನು ಹೆಚ್ಚಿಸುವ ಪ್ರಸ್ತಾವನೆಗೆ ಸರ್ಕಾರದ ಮಂಜೂರಾತಿ ನೀಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ಸದರಿ ಪ್ರಸ್ತಾವನೆ ಪರಿಶೀಲಿಸಿ ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ: ಸಕಇ 197 ಪವಯೋ 2013, ಬೆಂಗಳೂರು**

**ದಿನಾಂಕ: 30-8-2013**

ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ನಿರ್ದೇಶನಾಲಯ, ಬೆಂಗಳೂರು, ಇವರು ಸಲ್ಲಿಸಿರುವ ಪ್ರಸ್ತಾವನೆಯಲ್ಲಿರುವಂತೆ ಈ ಕೆಳಕಂಡ ಸ್ಥಳಗಳಲ್ಲಿನ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯಾಬಲವನ್ನು ಈ ಕೆಳಕಂಡಂತೆ ಹೆಚ್ಚಿಸಲು ಸರ್ಕಾರದ ಅನುಮತಿ ನೀಡಲಾಗಿದೆ.

| ಕ್ರ.ಸಂ. | ಜಿಲ್ಲೆ | ಸ್ಥಳ ವಿವರ | | ಮಂಜೂರಾತಿ ಸಂಖ್ಯೆ | ಹೆಚ್ಚಿಸಬೇಕಾದ ಸಂಖ್ಯೆ |
|---|---|---|---|---|---|
| 1 | ಚಿತ್ರದುರ್ಗ | 1 | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಚಳ್ಳಕೆರೆ, ಚಳ್ಳಕೆರೆ ತಾಲ್ಲೂಕು | 50 | 50 |
| | | 2 | ಮೆಟ್ರಿಕ್ ಪೂರ್ವ ಬಾಲಕಿಯರ | 50 | 100 |

| | | | | | |
|---|---|---|---|---|---|
| | | | ವಿದ್ಯಾರ್ಥಿನಿಲಯ ಮೊಳಕಾಲ್ಮೂರು, ಮೊಳಕಾಲ್ಮೂರು ತಾಲ್ಲೂಕು | | |
| 2 | ತುಮಕೂರು | 3 | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಹರಿಹರಪುರ, ಪಾವಗಡ ತಾಲ್ಲೂಕು | 25 | 25 |
| 3 | ಚಿಕ್ಕಮಗಳೂರು | 4 | ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ಶೃಂಗೇರಿ ಟೌನ್ | 75 | 25 |
| | | 5 | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಬಸರೀಕಟ್ಟೆ, ಕೊಪ್ಪ ತಾಲ್ಲೂಕು | 25 | 25 |
| 4 | ಕೊಡಗು | 6 | ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ ಕುಶಾಲನಗರ, ಸೋಮವಾರಪೇಟೆ ತಾಲ್ಲೂಕು | 40 | 10 |
| | | 7 | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಪೆರಾಜೆ, ಮಡಿಕೇರಿ ತಾಲ್ಲೂಕು | 25 | 15 |
| 5 | ಹಾವೇರಿ | 8 | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಬಿಸಲಹಳ್ಳಿ, ಬ್ಯಾಡಗಿ ತಾಲ್ಲೂಕು | 25 | 25 |
| | | 9 | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಅತ್ತಿಗೇರಿ, ಶಿಗ್ಗಾಂವ್ ತಾಲ್ಲೂಕು | 75 | 150 |
| 6 | ಬೆಳಗಾಂ | 10 | ಮೆಟ್ರಿಕ್ ಪೂರ್ವ ಬಾಲಕರ ವಿದ್ಯಾರ್ಥಿನಿಲಯ ಬೆಳಗಾಂ ಟೌನ್, ಬೆಳಗಾಂ ತಾಲ್ಲೂಕು | 75 | 25 |
| 7 | ರಾಯಚೂರು | 11 | ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ ಕವಿತಾಳ, ಮಾನ್ವಿ ತಾಲ್ಲೂಕು | 25 | 25 |
| | | 12 | ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ಮಾನ್ವಿ, ಮಾನ್ವಿ ತಾಲ್ಲೂಕು | 50 | 50 |
| | | 13 | ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ದೇವದುರ್ಗ | 113 | 107 |
| | | 14 | ಮೆಟ್ರಿಕ್ ಪೂರ್ವ ಬಾಲಕಿಯರ ವಿದ್ಯಾರ್ಥಿನಿಲಯ ಮಸ್ಕಿ, ಲಿಂಗಸುಗೂರು ತಾಲ್ಲೂಕು | 50 | 25 |
| | | 15 | ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ಲಿಂಗಸುಗೂರು ಟೌನ್, ಲಿಂಗಸುಗೂರು ತಾಲ್ಲೂಕು | 50 | 50 |
| | | 16 | ಮೆಟ್ರಿಕ್ ನಂತರದ ಬಾಲಕರ ವಿದ್ಯಾರ್ಥಿನಿಲಯ ರಾಯಚೂರು ಟೌನ್, ರಾಯಚೂರು ತಾಲ್ಲೂಕು | 150 | 100 |

| | | | | | |
|---|---|---|---|---|---|
| | | 17 | ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿನಿಲಯ ರಾಯಚೂರು ಟೌನ್, ರಾಯಚೂರು ತಾಲ್ಲೂಕು | 75 | 25 |
| | | | ಒಟ್ಟು | 978 | 832 |

ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ ಎಫ್‌ಡಿ 01 ಟಿಎಫ್‌ಪಿ 2013, ದಿನಾಂಕ: 10-05-2013 ರಲ್ಲಿ ಸರ್ಕಾರದ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಆರ್ಥಿಕ ಅಧಿಕಾರದ ಮೇರೆಗೆ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

**(ಎನ್. ನರಸಿಂಹಮೂರ್ತಿ)**
ಸರ್ಕಾರದ ಅಧೀನ ಕಾರ್ಯದರ್ಶಿ-2
ಸಮಾಜ ಕಲ್ಯಾಣ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು, (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು ಲೆಕ್ಕಪರಿಶೋಧನೆ-2) ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕೃಷಿಭವನ, ಬೆಂಗಳೂರು.
3. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘ, ಬೆಂಗಳೂರು.
4. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳ ಶಾಖೆ, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
5. ಸರ್ಕಾರದ ಉಪ ಕಾರ್ಯದರ್ಶಿ-2, ಸಮಾಜ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
6. ಶಾಖಾ ರಕ್ಷ ಕಡತ.
7. ಹೆಚ್ಚುವರಿ ಪ್ರತಿ-03.